# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 73 |
| ಸದಸ್ಯರ ಹೆಸರು | : | ಶ್ರೀ ಪಿ.ಆರ್. ರಮೇಶ್<br>(ನಾಮ ನಿರ್ದೇಶನ ಹೊಂದಿದವರು) |
| ಉತ್ತರಿಸಬೇಕಾದ ದಿನಾಂಕ | : | 15.02.2022 |
| ಉತ್ತರಿಸುವವರು | : | ಪೌರಾಡಳಿತ, ಸಣ್ಣ ಕೈಗಾರಿಕೆ ಹಾಗೂ ಸಾರ್ವಜನಿಕ ಉದ್ಯಮಗಳ ಸಚಿವರು. |

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಪೀಣ್ಯ ಕೈಗಾರಿಕೆ ಪ್ರದೇಶದಲ್ಲಿ ಕೈಗಾರಿಕೆಗಳ ಪ್ರಸ್ತುತ ಸ್ಥಿತಿಗತಿಗಳೇನು ಈ ಕುರಿತಂತೆ ಸರ್ಕಾರದ ನಿಲುವೇನು; (ವಿವರ ನೀಡುವುದು) | ಪೀಣ್ಯ ಕೈಗಾರಿಕಾ ಪ್ರದೇಶವು ಏಷ್ಯಾದ ಅತಿದೊಡ್ಡ ಕೈಗಾರಿಕಾ ಪ್ರದೇಶಗಳ ಪೈಕಿ ಒಂದಾಗಿದ್ದು ಇಲ್ಲಿ ಇಂಜಿನಿಯರಿಂಗ್ ಉತ್ಪನ್ನಗಳು, ಆಹಾರ ಉತ್ಪನ್ನಗಳು, ಆಟೋಮೊಬೈಲ್ ಬಿಡಿಭಾಗಗಳು, ಸೌರಶಕ್ತಿಗೆ ಸಂಬಂಧಿಸಿದ ಬಿಡಿಭಾಗಗಳು, ವಿದ್ಯುತ್ ಮತ್ತು ಎಲೆಕ್ಟ್ರಾನಿಕ್, ಸಿದ್ಧ ಉಡುಪು ಇತ್ಯಾದಿಗಳನ್ನು ತಯಾರಿಸುವ ಕೈಗಾರಿಕೆಗಳಿದ್ದು ಅವು ಉತ್ತಮವಾಗಿ ಕಾರ್ಯನಿರ್ವಹಿಸುತ್ತಿವೆ.<br><br>ಪೀಣ್ಯ ಕೈಗಾರಿಕಾ ಪ್ರದೇಶದಲ್ಲಿ ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿಯು ಅಭಿವೃದ್ಧಿಪಡಿಸಿರುವ 1485 ಎಕರೆಗಳಲ್ಲಿ (845 ನಿವೇಶನಗಳು) ಮತ್ತು ಕರ್ನಾಟಕ ರಾಜ್ಯ ಸಣ್ಣ ಕೈಗಾರಿಕೆಗಳ ಅಭಿವೃದ್ಧಿ ನಿಗಮವು ಅಭಿವೃದ್ಧಿಪಡಿಸಿರುವ 301.5 ಎಕರೆಗಳಲ್ಲಿ 1061 ಶೆಡ್‌ಗಳು ಮತ್ತು 268 ನಿವೇಶನಗಳು ಇದ್ದು ಸುತ್ತಮುತ್ತಲಿನ ಖಾಸಗಿ ಕೈಗಾರಿಕಾ ಪ್ರದೇಶಗಳಲ್ಲಿ ಸುಮಾರು 10,000 ಕ್ಕೂ ಹೆಚ್ಚು ಸೂಕ್ಷ್ಮ, ಸಣ್ಣ ಮತ್ತು ಮಧ್ಯಮ ಕೈಗಾರಿಕೆಗಳು ಹಾಗೂ ಭಾರಿ ಕೈಗಾರಿಕೆಗಳು ಕಾರ್ಯನಿರ್ವಹಿಸುತ್ತಿವೆ. ಈ ಕೈಗಾರಿಕೆಗಳಿಂದ ರಾಜ್ಯ ಮತ್ತು ಕೇಂದ್ರ ಸರ್ಕಾರಕ್ಕೆ ಸುಮಾರು ರೂ.1200 ಕೋಟಿ ವಾರ್ಷಿಕ ಜಿ.ಎಸ್.ಟಿ ತೆರಿಗೆ ಸಂದಾಯವಾಗುತ್ತದೆ.<br><br>ಕರ್ನಾಟಕ ಸರ್ಕಾರದ ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆಯು, ಕರ್ನಾಟಕ ರಾಜ್ಯ ಸಣ್ಣ ಕೈಗಾರಿಕೆಗಳ ಅಭಿವೃದ್ಧಿ ನಿಗಮದಿಂದ ರೂ.30 ಕೋಟಿ ವೆಚ್ಚದಲ್ಲಿ ಮೂಲಸೌಕರ್ಯವನ್ನು ಅಭಿವೃದ್ಧಿಪಡಿಸಿದೆ.<br><br>ಇತ್ತೀಚೆಗೆ ಕೋವಿಡ್ 1, 2 ಮತ್ತು 3ನೇ ಅಲೆಗಳಿಂದಾಗಿ ಹಾಗೂ ಉಕ್ಕು ಮತ್ತು ಕಬ್ಬಿಣದ ಬೆಲೆಯಲ್ಲಿ ಹೆಚ್ಚಳವಾದ್ದರಿಂದ ಮಾರುಕಟ್ಟೆಯಲ್ಲಿನ ಪೈಪೋಟಿಯಿಂದ ಇಲ್ಲಿನ ಸಣ್ಣ ಪ್ರಮಾಣದ ಕೈಗಾರಿಕೆಗಳು ಉತ್ಪಾದನೆ ಮಾಡಲು ಕಷ್ಟಕರವಾಗಿರುತ್ತದೆ. |

| | | |
|---|---|---|
| ಆ) | ಸದರಿ ಪ್ರದೇಶದಲ್ಲಿ ನಾನಾ ಕಾರಣಗಳಿಂದ ಮುಚ್ಚಲಾಗಿರುವ ಕಾರ್ಖಾನೆಗಳೆಷ್ಟು; ಅವುಗಳನ್ನು ಪುನರ್ ಆರಂಭಿಸಲು ಸರ್ಕಾರದ ಕ್ರಮವೇನು; (ವಿವರ ನೀಡುವುದು) | "ಮುಚ್ಚಿರುವ ಕೈಗಾರಿಕೆ" ಗಳ ಬಗ್ಗೆ ಎಂ.ಎಸ್.ಎಂ.ಇ.ಡಿ ಕಾಯಿದೆ 2006 ರಲ್ಲಿ ಸ್ಪಷ್ಟ ವ್ಯಾಖ್ಯಾನ ಇಲ್ಲದೇ ಇರುವುದರಿಂದ ಈ ವ್ಯವಸ್ಥೆಯಲ್ಲಿ ಈ ಕೈಗಾರಿಕೆಗಳು ಮುಚ್ಚಿರುವ ಬಗ್ಗೆ ಮಾಹಿತಿ ಸಂಗ್ರಹಿಸಲು ಅವಕಾಶ ಇರುವುದಿಲ್ಲ.<br><br>ರೋಗಗ್ರಸ್ಥ ಕೈಗಾರಿಕೆಗಳನ್ನು ಪುನಶ್ಚೇತನಗೊಳಿಸಲು ಭಾರತೀಯ ರಿಸರ್ವ್ ಬ್ಯಾಂಕ್‌ನ ಮಾರ್ಗಸೂಚಿ ಅನುಸಾರ ಬ್ಯಾಂಕುಗಳು ಕ್ರಮ ವಹಿಸಬೇಕಿರುತ್ತದೆ. ಮುಚ್ಚಲಾಗಿರುವ ಕಾರ್ಖಾನೆಗಳನ್ನು ಪುನರ್ ಆರಂಭಿಸಲು ಯಾವುದೇ ಕ್ರಮವಿರುವುದಿಲ್ಲ. |
| ಇ) | ಸದರಿ ಪ್ರದೇಶಗಳಲ್ಲಿರುವ ಕಾರ್ಖಾನೆಗಳಿಗೆ/ ಕೈಗಾರಿಕೆಗಳಿಗೆ ದೈನಂದಿನ ಕಾರ್ಯನಿರ್ವಹಿಸಲು ಸರ್ಕಾರದಿಂದ ಯಾವ ರೀತಿಯ ಸಹಾಯವನ್ನು ಮಾಡಲಾಗಿದೆ? (ವಿವರ ನೀಡುವುದು) | ರಾಜ್ಯ ಸರ್ಕಾರವು ಇಲ್ಲಿರುವ ಉದ್ಯಮಶೀಲರು ಹೊಸದಾಗಿ/ ತಮ್ಮ ಉದ್ಯಮದ ವಿಸ್ತರಣೆ/ ವೈರುಧ್ಯೀಕರಣ/ ಆಧುನೀಕರಣ ಮಾಡಿದಲ್ಲಿ ಅವುಗಳಿಗೆ ಹೊಸ ಕೈಗಾರಿಕಾ ನೀತಿ 2020-25 ರನ್ವಯ ಪ್ರೋತ್ಸಾಹ ಮತ್ತು ರಿಯಾಯಿತಿಗಳನ್ನು ನೀಡುತ್ತದೆ.<br><br>ಸದರಿ ಪ್ರದೇಶಗಳಲ್ಲಿರುವ ಕಾರ್ಖಾನೆಗಳಿಗೆ/ ಕೈಗಾರಿಕೆಗಳಿಗೆ ದೈನಂದಿನ ಕಾರ್ಯನಿರ್ವಹಿಸಲು ಸರ್ಕಾರದಿಂದ ವಿದ್ಯುತ್, ನೀರು, ರಸ್ತೆ, ಒಳಚರಂಡಿ ಮುಂತಾದ ಮೂಲಸೌಕರ್ಯವನ್ನು ಒದಗಿಸಲಾಗಿದೆ.<br><br>"ಕೈಗಾರಿಕಾ ಟೌನ್ ಶಿಪ್" ಸ್ಥಾಪಿಸುವ ಕುರಿತು 2021-22ನೇ ಸಾಲಿನ ಆಯವ್ಯಯ ಭಾಷಣದ ಕಂಡಿಕೆ 214 ರಲ್ಲಿ "ರಾಜ್ಯದಲ್ಲಿ ಉತ್ಪಾದನಾ ವಲಯವನ್ನು ಆಕರ್ಷಿಸುವ ಉದ್ದೇಶದಿಂದ ಪೀಣ್ಯದಲ್ಲಿ ಕೈಗಾರಿಕಾ ಟೌನ್ ಶಿಪ್‌ನ್ನು ಸ್ಥಾಪಿಸಲಾಗುವುದು. ಇಲ್ಲಿ ಅಗತ್ಯ ಮೂಲಭೂತ ಸೌಲಭ್ಯವನ್ನು 100 ಕೋಟಿ ರೂ. ವೆಚ್ಚದಲ್ಲಿ ಅಭಿವೃದ್ಧಿಪಡಿಸಲಾಗುವುದು" ಎಂದು ಘೋಷಿಸಲಾಗಿದೆ. ಅದರಂತೆ, ರಾಜ್ಯದಲ್ಲಿ ಉತ್ಪಾದನಾ ವಲಯವನ್ನು ಆಕರ್ಷಿಸುವ ಉದ್ದೇಶದಿಂದ ಪೀಣ್ಯ ಕೈಗಾರಿಕಾ ಪ್ರದೇಶದಲ್ಲಿ ಅಗತ್ಯ ಮೂಲಭೂತ ಸೌಲಭ್ಯಗಳ ಅಭಿವೃದ್ಧಿ / ಉನ್ನತೀಕರಣದೊಂದಿಗೆ ಸಮಗ್ರವಾಗಿ ಅಭಿವೃದ್ಧಿಪಡಿಸಲು 2021-22ನೇ ಸಾಲಿನ ಆಯವ್ಯಯ ಘೋಷಣೆಯಂತೆ ಅನುಮೋದನೆ ನೀಡುವ ಕ್ರಮ ಜಾರಿಯಲ್ಲಿದೆ. |

**ಸಿಐ 30 ಸಿಎಸ್‌ಸಿ 2022**

(ಎನ್. ನಾಗರಾಜು (ಎಂ.ಟಿ.ಬಿ))
ಪೌರಾಡಳಿತ ಮತ್ತು ಸಣ್ಣ ಕೈಗಾರಿಕೆ
ಹಾಗೂ ಸಾರ್ವಜನಿಕ ಉದ್ದಿಮೆಗಳ ಸಚಿವರು.